ನಂ. 4399
ದಿನಾಂಕ 17/10/18

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: M/s Infosys Limited ರವರಿಗೆ ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನ ಡ್ಯಾಗೇರಹಳ್ಳಿ ಗ್ರಾಮದಲ್ಲಿ ಸ್ವಂತ ಬಳಕೆಯ ಉದ್ದೇಶಕ್ಕಾಗಿ ಹಂಚಿಕೆಯಾಗಿರುವ 40 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಘಟಕದ ಯೋಜನೆಯಲ್ಲಿ ಅನುಷ್ಠಾನಗೊಳ್ಳದೇ ಬಾಕಿ ಇರುವ 10 ಮೆ.ವ್ಯಾ. ಸಾಮರ್ಥ್ಯದ ಅನುಷ್ಠಾನದ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂಖ್ಯೆ : ಇಎನ್ 56 ಎನ್‌ಸಿಇ 2017, ದಿ: 16.03.2017.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರ ಪತ್ರ ಸಂಖ್ಯೆ : ಕೆ.ಆರ್.ಇ.ಡಿ/07/ಎಸ್.ಜಿ/519/2018/6365, ದಿನಾಂಕ : 19.09.2018.

* * *

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದ ಮೂಲಕ M/s Infosys Limited ರವರಿಗೆ ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನ ಡ್ಯಾಗೇರಹಳ್ಳಿ ಗ್ರಾಮದಲ್ಲಿ ಸ್ವತಂತ್ರ ವಿದ್ಯುತ್ ಉತ್ಪಾದಕರ ವಿಭಾಗದಡಿ ಸ್ವಂತ ಬಳಕೆಯ ಉದ್ದೇಶಕ್ಕಾಗಿ 40 ಮೆ.ವ್ಯಾ ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಯೋಜನೆಯನ್ನು ಕೆಲವು ಷರತ್ತುಗಳಿಗೊಳಪಟ್ಟು ಸರ್ಕಾರದ ನಿರಾಕ್ಷೇಪಣೆಯನ್ನು ನೀಡಲಾಗಿರುತ್ತದೆ.

ಸದರಿ ಯೋಜನೆಯ ಒಟ್ಟು ಸಾಮರ್ಥ್ಯವಾದ 40 ಮೆ.ವ್ಯಾ. ಗಳ ಪೈಕಿ 30 ಮೆ.ವ್ಯಾ. ಯೋಜನೆಯನ್ನು M/s Infosys Limited ರವರು ಅನುಷ್ಠಾನಗೊಳಿಸಿದ್ದು, ಬಾಕಿ ಉಳಿದ 10 ಮೆ.ವ್ಯಾ. ಸಾಮರ್ಥ್ಯವನ್ನು ಅನುಷ್ಠಾನಗೊಳಿಸಲು ನಿಗದಿತ ಅವಧಿಯ ಮುಕ್ತಾಯದ ದಿನಾಂಕದಿಂದ ಒಂದು ವರ್ಷದ ಅವಧಿಗೆ ಕಾಲಾವಧಿ ವಿಸ್ತರಣೆಯನ್ನು M/s Infosys Limited ರವರು ಕೋರಿದ್ದು, ಈ ಸಂಬಂಧ ಅನ್ವಯವಾಗುವ ಕಾಲಾವಧಿ ವಿಸ್ತರಣಾ ಶುಲ್ಕವನ್ನು ಪಾವತಿಸಿ, ಯೋಜನೆಯ ಅನುಷ್ಠಾನಕ್ಕಾಗಿ ಸಲ್ಲಿಸಿರುವ ನೆರವೇರಿಕೆ ಬ್ಯಾಂಕ್ ಖಾತರಿಯ ಅವಧಿಯನ್ನು ದಿನಾಂಕ: 30.11.2019 ರವರೆಗೆ ವಿಸ್ತರಿಸಿ ಸಲ್ಲಿಸಿರುವುದರಿಂದ M/s Infosys Limited ರವರಿಗೆ ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನ ಡ್ಯಾಗೇರಹಳ್ಳಿ ಗ್ರಾಮದಲ್ಲಿ ಹಂಚಿಕೆಯಾಗಿರುವ 40 ಮೆ.ವ್ಯಾ. ಸಾಮರ್ಥ್ಯದ ಯೋಜನೆಯಲ್ಲಿ ಅನುಷ್ಠಾನಗೊಳ್ಳದೆ ಬಾಕಿ ಉಳಿದಿರುವ 10 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಘಟಕ ಯೋಜನೆಯ ಅನುಷ್ಠಾನದ ಅವಧಿಯನ್ನು ಮುಕ್ತಾಯದ ದಿನಾಂಕದಿಂದ ಒಂದು ವರ್ಷದವರೆಗೆ ಅಂದರೆ ದಿನಾಂಕ; 30.09.2019 ರವರೆಗೆ ವಿಸ್ತರಿಸಿ ಆದೇಶವನ್ನು ಹೊರಡಿಸುವಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದ ಮೂಲಕ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

Update Extend GO

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 537 ಎನ್‌ಸಿಇ 2018**

**ಬೆಂಗಳೂರು, ದಿನಾಂಕ: 12.10.2018.**

MD KREDL

M/s Infosys Limited ರವರಿಗೆ ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನ ಡ್ಯಾಗೇರಹಳ್ಳಿ ಗ್ರಾಮದಲ್ಲಿ ಸ್ವತಂತ್ರ ವಿದ್ಯುತ್ ಉತ್ಪಾದಕರ ವಿಭಾಗದಡಿ ಸ್ವಂತ ಬಳಕೆಯ ಉದ್ದೇಶಕ್ಕಾಗಿ ಹಂಚಿಕೆಯಾಗಿರುವ 40 ಮೆ.ವ್ಯಾ.

GM (Tech) KREDL

ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಯೋಜನೆಯಲ್ಲಿ ಅನುಷ್ಠಾನಗೊಳ್ಳದೇ ಬಾಕಿ ಉಳಿದಿರುವ 10 ಮೆ.ವ್ಯಾ. ಸಾಮರ್ಥ್ಯದ ಅನುಷ್ಠಾನದ ಅವಧಿಯನ್ನು ನಿಯಮಾನುಸಾರ ಅನ್ವಯವಾಗುವ ಶುಲ್ಕಗಳನ್ನು ಪಾವತಿಸುವ ಷರತ್ತಿಗೊಳಪಟ್ಟು ದಿನಾಂಕ: 30.09.2019 ರವರೆಗೆ ವಿಸ್ತರಿಸಿ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಇಎನ್ 56 ಎನ್‌ಸಿಇ 2017, ದಿನಾಂಕ : 16.03.2017 ರಲ್ಲಿನ ಷರತ್ತುಗಳು ಯಥಾವತ್ತಾಗಿ ಮುಂದುವರೆಯುತ್ತವೆ.

ಈ ಆದೇಶವನ್ನು ರದ್ದು ಮಾಡುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

**ಇವರಿಗೆ:**

ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.
2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು.
6 ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ, ತುಮಕೂರು.
7 ಉಪ ಅರಣ್ಯ ಸಂರಕ್ಷಣಾಧಿಕಾರಿ, ತುಮಕೂರು ಜಿಲ್ಲೆ, ತುಮಕೂರು.
8 ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಬೆಂಗಳೂರು.
9 M/s Infosys Limited Plot No 44, Infosys Avenue, Hosur Road, Bangalore-560 110.
11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** M/s Infosys Limited ರವರಿಗೆ ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನ ಡ್ಯಾಗೇರಹಳ್ಳಿ ಗ್ರಾಮದಲ್ಲಿ 40 ಮೆ.ವ್ಯಾ ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು ಸ್ಥಾಪಿಸಲು ನಿರಾಕ್ಷೇಪಣಾ ಪತ್ರ ನೀಡುವ ಬಗ್ಗೆ.

**ಓದಲಾಗಿದೆ:** 1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: 519.
2. ದಿನಾಂಕ: 16.02.2017 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿ.

* * *

**ಪ್ರಸ್ತಾವನೆ :-**

M/s Infosys Limited ರವರಿಗೆ ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನ ಡ್ಯಾಗೇರಹಳ್ಳಿ ಗ್ರಾಮದಲ್ಲಿ 40 ಮೆ.ವ್ಯಾ ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು Independant Power Producer (IPP) Category ಯಡಿ ಸ್ಥಾಪಿಸಿ, ಸದರಿ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಸ್ವಂತಕ್ಕೆ ಉಪಯೋಗಿಸಿಕೊಳ್ಳಲು (Captive use) ಅನುಮತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಯೋಜನೆಯ ಸ್ಥಳದ ವಿವರಗಳು ಮತ್ತು ಈ ಕೆಳಕಂಡ ಮಾಹಿತಿಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಏಕ ಕಡತ ಪದ್ಧತಿಯಡಿ ಮೇಲೆ ಓದಲಾದ (1) ರ ಕಡತದಲ್ಲಿ ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

| | | |
|---|---|---|
| ಯೋಜನಾ ಪ್ರದೇಶದ ವಿವರ | : | ಜಿಲ್ಲೆ : ತುಮಕೂರು<br>ತಾಲ್ಲೂಕು : ಶಿರಾ<br>ಗ್ರಾಮ : ಡ್ಯಾಗೇರಹಳ್ಳಿ |
| ಯೋಜನಾ ಪ್ರದೇಶದ ಜಮೀನಿನ ವಿವರ | : | ಖಾಸಗಿ ಜಮೀನು |
| ಯೋಜನಾ ಪ್ರದೇಶದ ಸಮೀಪದ ಸಬ್-ಸ್ಟೇಷನ್ ವಿವರ | : | ಜವಂಗೊಂಡನ ಹಳ್ಳಿ |
| ಶಾಸ್ವತ ಆದಾಯ ತೆರಿಗೆ ಖಾತೆ ಸಂಖ್ಯೆ | : | AAACI4789L |
| ಉತ್ಪಾದನೆಯಾಗುವ ವಿದ್ಯುತ್ತಿನ ಉಪಯೋಗದ ವಿಧಾನ | : | ಸ್ವಂತಕ್ಕೆ ಉಪಯೋಗಿಸಲು |
| ನಿಗದಿತ ಶುಲ್ಕ ಪಾವತಿಸಲಾಗಿದೆಯೇ | : | ಅರ್ಜಿ ನೋಂದಣಿ ಶುಲ್ಕ ಪಾವತಿಸಿದೆ |

M/s Infosys Limited ರವರಿಗೆ ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನ ಡ್ಯಾಗೇರಹಳ್ಳಿ ಗ್ರಾಮದಲ್ಲಿ 40 ಮೆ.ವ್ಯಾ ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು Independant Power Producer (IPP) Category ಯಡಿ ಸ್ಥಾಪಿಸಿ, ಸದರಿ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಸ್ವಂತಕ್ಕೆ ಉಪಯೋಗಿಸಿಕೊಳ್ಳಲು (Captive use) ಅನುಮತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಗೆ ನಿರಾಕ್ಷೇಪಣೆಯನ್ನು ನೀಡುವ ಕುರಿತು ಮೇಲೆ ಓದಲಾದ (2) ರಂತೆ ದಿನಾಂಕ: 16.02.2017 ರಂದು ನಡೆದ ಹಂಚಿಕೆ ಸಮಿತಿ ಸಭೆಯಲ್ಲಿ ಕೂಲಂಕಷವಾಗಿ ಪರಿಶೀಲಿಸಿ, ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ. ಸದರಿ ಶಿಫಾರಸ್ಸಿನಂತೆ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್-56 ವಿಎನ್‌ಸಿಇ 2017**
**ಬೆಂಗಳೂರು, ದಿನಾಂಕ: 16.03.2017.**

M/s Infosys Limited ರವರಿಗೆ ತುಮಕೂರು ಜಿಲ್ಲೆಯ ಶಿರಾ ತಾಲ್ಲೂಕಿನ ಡ್ಯಾಗೇರಹಳ್ಳಿ ಗ್ರಾಮದಲ್ಲಿ 40 ಮೆ.ವ್ಯಾ ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು Independant Power Producer (IPP) Category

.....2)

ಯಡಿ ಸ್ಥಾಪಿಸಿ, ಸದರಿ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಸ್ವಂತಕ್ಕೆ ಉಪಯೋಗಿಸಿಕೊಳ್ಳಲು (Captive use) ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ **ನಿರಾಕ್ಷೇಪಣೆಯನ್ನು** ನೀಡಲಾಗಿದೆ.

1. M/s Infosys Limited ರವರು ಸದರಿ ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ/ಸಂಸ್ಥೆಗಳ/ಸಕ್ಷಮ ಪ್ರಾಧಿಕಾರಗಳ ಅನುಮೋದನೆ ಪಡೆದುಕೊಳ್ಳತಕ್ಕದ್ದು;
2. M/s Infosys Limited ರವರು ಸೌರ ನೀತಿ 2014-21 ರನ್ವಯ ಈ ಬಾಬ್ತು ಅನ್ವಯಿಸುವ ಶುಲ್ಕ ಹಾಗೂ ಇತರ ಬ್ಯಾಂಕ್ ಖಾತರಿಯನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು;
3. ಪ್ರಸ್ತಾಪಿತ ಸೋಲಾರ್ ಘಟಕದಿಂದ ಉತ್ಪತ್ತಿಯಾಗುವ ವಿದ್ಯುತ್ತನ್ನು Independant Power Producer (IPP) Category ಯಡಿ ಸ್ಥಾಪಿಸಿ, ಸ್ವಂತಕ್ಕೆ ಉಪಯೋಗಿಸಿಕೊಳ್ಳಲು (Captive use) ಹಾಗೂ ಈ ಸಂಬಂಧ ಅಗತ್ಯವಿರುವ ವಿದ್ಯುತ್ ಜಾಲಕ್ಕೆ ಜೋಡಣೆ ಮಾಡಲು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ವೀಲಿಂಗ್ ಮತ್ತು ಬ್ಯಾಂಕಿಂಗ್ ಒಪ್ಪಂದ ಮಾಡಿಕೊಳ್ಳಲು ಅನುಮತಿಸಿದೆ;
4. M/s Infosys Limited ರವರು ಪ್ರಸ್ತಾಪಿತ ಸೌರ ವಿದ್ಯುತ್ ಘಟಕವನ್ನು ಸ್ಥಾಪಿಸಲು ಅಗತ್ಯವಿರುವ ಜಮೀನನ್ನು ಕರ್ನಾಟಕ ಭೂ-ಸುಧಾರಣೆ ಕಾಯ್ದೆಯನ್ವಯ ಖರೀದಿಸತಕ್ಕದ್ದು ಮತ್ತು ಸದರಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡಿಕೊಂಡ ನಂತರವೇ ಸೌರ ವಿದ್ಯುತ್ ಘಟಕಗಳನ್ನು ಸ್ಥಾಪಿಸತಕ್ಕದ್ದು;
5. ಯೋಜನಾ ಅಭಿವೃದ್ಧಿದಾರರು ಕೆ.ಆರ್.ಇ.ಡಿ.ಎಲ್ ಸಂಸ್ಥೆಗೆ ಸೌರ ನೀತಿ 2014-21 ರ ಪ್ರಕಾರ ಅನ್ವಯವಾಗುವ ಸಂಸ್ಕರಣಾ ಶುಲ್ಕವನ್ನು (Facilitation fee) ಹಂಚಿಕೆಯ ಆದೇಶದ ದಿನದಿಂದ 15 ದಿನಗಳೊಳಗೆ ಪಾವತಿಸಬೇಕೆಂದು ಹಾಗೂ ನಲವತ್ತೈದು ದಿನಗಳೊಳಗೆ ಬಿಡ್ ಸೆಕ್ಯುರಿಟಿ (Bid Security)/ಪರ್ಫಾಮೆನ್ಸ್ ಬ್ಯಾಂಕ್ ಗ್ಯಾರಂಟಿಯನ್ನು (Performance Bank Guarantee) ಸಲ್ಲಿಸತಕ್ಕದ್ದು. ಇಲ್ಲದಿದ್ದಲ್ಲಿ, ಈ ಹಂಚಿಕೆಯ ಆದೇಶವು ತಂತಾನೇ ರದ್ದಾಗುವುದು;
6. ಸದರಿ ಬಿಡ್ ಸೆಕ್ಯುರಿಟಿ (Bid Security)/ಪರ್ಫಾಮೆನ್ಸ್ ಬ್ಯಾಂಕ್ ಗ್ಯಾರಂಟಿಯನ್ನು (Performance Bank Guarantee) ಸರ್ಕಾರಿ ಆದೇಶದ ಷರತ್ತುಗಳನ್ವಯ ಪ್ರಸ್ತಾವಿತ ಯೋಜನೆಯು ಪೂರ್ಣವಾಗಿ ಅನುಷ್ಠಾನಗೊಂಡ ನಂತರ ಸಂಬಂಧಪಟ್ಟ ಅಭಿವೃದ್ಧಿದಾರರಿಗೆ ಹಿಂದಿರುಗಿಸಲು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಅಗತ್ಯ ಕ್ರಮ ವಹಿಸತಕ್ಕದ್ದು;
7. M/s Infosys Limited ರವರು ಸ್ಥಾಪಿಸುತ್ತಿರುವ ಈ ಸೌರ ವಿದ್ಯುತ್ ಘಟಕಕ್ಕೆ ಸರ್ಕಾರದ 2014-21 ರ ಸೋಲಾರ್ ನೀತಿ ಹಾಗೂ ಸರ್ಕಾರದ 2014-19 ರ ಕೈಗಾರಿಕಾ ನೀತಿಗಳ ಪ್ರಕಾರ ಅನ್ವಯವಾಗುವ ಸವಲತ್ತುಗಳು ಲಭ್ಯವಾಗುತ್ತವೆ.
8. ಪ್ರಸ್ತಾಪಿತ ಸೌರ ವಿದ್ಯುತ್ ಘಟಕವನ್ನು ಆದೇಶ ಹೊರಡಿಸಿದ ದಿನಾಂಕದಿಂದ 18 ತಿಂಗಳೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ರದ್ದು ಮಾಡುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

ಇವರಿಗೆ:

ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

ಪ್ರತಿ:

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.

2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.

3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.

4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.

5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು.

6 ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ, ತುಮಕೂರು.

7 ಉಪ ಅರಣ್ಯ ಸಂರಕ್ಷಣಾಧಿಕಾರಿ, ತುಮಕೂರು ಜಿಲ್ಲೆ, ತುಮಕೂರು.

8 ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಬೆಂಗಳೂರು.

9 M/s Infosys Limited Plot No 44, Infosys Avenue, Hosur Road, Bangalore-560 110.

10 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.

12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.

13 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.